# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಕಛೇರಿಯ ಸಭಾಂಗಣದಲ್ಲಿ ದಿನಾಂಕ: 03-10-2020 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ, ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ.ಶ್ರೀಕಾಂತ್, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ರಿವ್ಹೋಬ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ)
4. ಶಾಂತಕುಮಾರ್ ಲೇಔಟ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ)
5. ಶ್ರೀ ಮಣಿಶಂಕರ್, ಸದಸ್ಯರು ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು,
6. ಶ್ರೀ ತಿಪ್ಪೇಸ್ವಾಮಿ, ಸದಸ್ಯರು ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು,

**ಹಾಜರಿದ್ದ ಅಧಿಕಾರಿಗಳು**

1. ಶ್ರೀಮತಿ ಡಾ॥ ವಿನುತಾ, ವೈದ್ಯಾಧಿಕಾರಿಗಳು,
2. ಶ್ರೀ ಗುರುಪ್ರಸನ್ನ, ಸಹ ಕಂದಾಯ ಅಧಿಕಾರಿ, ಮಾರುತಿಸೇವಾನಗರ ಉಪ ವಿಭಾಗ
3. ಶ್ರೀ ನವೀನ್, ಸಹಾಯಕ ಇಂಜಿನಿಯರ್ (ಬೆಸ್ಕಾಂ ಇಲಾಖೆ)
4. ಶ್ರೀ ಹನುಮಂತ, ಸಹಾಯಕ ಇಂಜಿನಿಯರ್ (ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ)
5. ಶ್ರೀ ರೂಮನ್ ಪಾಷಾ, ಎ.ಎಸ್.ಐ (ಪೊಲೀಸ್ ಇಲಾಖೆ)

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ರಿವ್ಹೋಬ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ) ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ,** ವಾರ್ಡ್ ವ್ಯಾಪ್ತಿಯ ಕುಕ್‌ಟೌನ್ ನಲ್ಲಿ ಇತ್ತೀಚೆಗೆ ಸರಗಳ್ಳತನ ಹಾಗೂ ದರೋಡೆ ಪ್ರಕರಣಗಳು ಹೆಚ್ಚಾಗಿದ್ದು, ಇದನ್ನು ತಡೆಗಟ್ಟಲು ಅಂತಹ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ಪೊಲೀಸ್ ಗಸ್ತನ್ನು ಹೆಚ್ಚಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸರಗಳ್ಳತನ ಹಾಗೂ ದರೋಡೆ ಪ್ರಕರಣಗಳು ಸಂಭವಿಸಿದಲ್ಲಿ 100 ಸಂಖ್ಯೆಗೆ ಕರೆ ಮಾಡಿ, ಪೊಲೀಸ್ ಇಲಾಖೆಗೆ ಮಾಹಿತಿ ತಿಳಿಸಲು ಹಾಗೂ ಅಹಿತಕರ ಘಟನೆಗಳು ಹೆಚ್ಚಿಗೆ ಸಂಭವಿಸುವ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಸೂಚಿಸಿದರು ಹಾಗೂ ಇತ್ತೀಚೆಗೆ ವೀಲರ್ ರಸ್ತೆಯಲ್ಲಿ ವಾಹನ ದಟ್ಟಣೆ ಹೆಚ್ಚಾಗುತ್ತಿರುವುದು ಕಂಡುಬಂದಿದ್ದು, ಸಂಚಾರ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿ, ತಡೆಗಟ್ಟುವ ಬಗ್ಗೆ ಕ್ರಮವಹಿಸಲು ಹಾಗೂ ಸಿಗ್ನಲ್‌ಗಳಲ್ಲಿ ನಾಮಫಲಕಗಳನ್ನು ಅಳವಡಿಸಲು ಸಭೆಯಲ್ಲಿ ಸೂಚಿಸಿದರು.

2) **ಶಾಂತಕುಮಾರ್ ಲೇಔಟ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ) ಸದಸ್ಯರು ಮಾತನಾಡುತ್ತಾ,** ಜೀವನಹಳ್ಳಿ ಜಂಕ್ಷನ್, ಬಾಣಸವಾಡಿ ಮುಖ್ಯರಸ್ತೆ ಮತ್ತು ನಾರ್ಥ್ ರೋಡ್ ಜಂಕ್ಷನ್‌ನಲ್ಲಿ ನೀರು ಹಾಗೂ ಚರಂಡಿ ಪೈಪ್‌ಲೈನ್‌ಗಳನ್ನು ಅಳವಡಿಸಲು ರಸೆಯನ್ನು ಅಗೆದು ಸರಿಯಾದ ರೀತಿಯಲ್ಲಿ ಅಗೆದ ರಸ್ತೆಯನ್ನು ಪುನರ್ ನಿರ್ಮಾಣ ಮಾಡದೇ ಇರುವುದರಿಂದ ರಸ್ತೆಯಲ್ಲಿ ಓಡಾಡುವ ವಾಹನ ಸವಾರರಿಗೆ ಹಾಗೂ

ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸದರಿ ರಸ್ತೆಗಳನ್ನು ಕೂಡಲೇ ಪುನರ್ ನಿರ್ಮಾಣ ಮಾಡಲು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮ ಇಲಾಖೆ ರವರಿಗೆ ಸಭೆಯಲ್ಲಿ ಸೂಚಿಸಿದರು.

3) **<u>ಶಾಂತಕುಮಾರ್ ಲೇಔಟ್ ರೆಸಿಡೆನ್ಷಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ) ಸದಸ್ಯರು ಮಾತನಾಡುತ್ತಾ,</u>** ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ಬಡಾವಣೆಗಳಲ್ಲಿ ವಿದ್ಯುತ್ ಕಂಬಗಳಿಗೆ ಹೊಂದಿಕೊಂಡಂತೆ ಇರುವ ಮರದ ಕೊಂಬೆ ರೆಂಬೆಗಳನ್ನು ಕತ್ತರಿಸಿ, ಕತ್ತರಿಸಿರುವ ಮರದ ತುಂಡುಗಳನ್ನು ಸದರಿ ಸ್ಥಳದಿಂದ ತೆರವುಗೊಳಿಸದೇ ಇರುವುದು ಕಂಡು ಬಂದಿದ್ದು ಇದರಿಂದ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿರುವುದರಿಂದ ಕೂಡಲೇ ಸದರಿ ಸ್ಥಳದಿಂದ ತೆರವುಗೊಳಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸಾರ್ವಜನಿಕರ ಹಿತದೃಷ್ಟಿಯಿಂದ ವಾರ್ಡ್ ವ್ಯಾಪ್ತಿಯಲ್ಲಿ ಕತ್ತರಿಸಿರುವ ಮರದ ಕೊಂಬೆ ರೆಂಬೆಗಳನ್ನು ಆಗಿಂದ್ದಾಗ್ಗೆ ತೆರವುಗೊಳಿಸಿ ಸಾರ್ವಜನಿಕರ ಹಾಗೂ ವಾಹನ ಸವಾರರಿಗೆ ಆಗುವ ತೊಂದರೆಯನ್ನು ತಡೆಯಲು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

4) **<u>ಶಾಂತಕುಮಾರ್ ಲೇಔಟ್ ರೆಸಿಡೆನ್ಷಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ) ಸದಸ್ಯರು ಮಾತನಾಡುತ್ತಾ,</u>** ವಾರ್ಡ್ ವ್ಯಾಪ್ತಿಯಲ್ಲಿರುವ ಬೀದಿ ದೀಪಗಳಿಗೆ ಅಳವಡಿಸಿರುವ ಟೈಮರ್‌ಗಳು ಸರಿಯಾಗಿ ಕೆಲಸ ನಿರ್ವಹಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಕೂಡಲೇ ಈ ಬಗ್ಗೆ ಬೀದಿ ದೀಪಗಳ ವಿಭಾಗ ರವರ ಗಮನಕ್ಕೆ ತಂದು ಬೀದಿ ದೀಪಗಳಿಗೆ ಟೈಮರ್‌ಗಳನ್ನು ಅಳವಡಿಸಲು ಕ್ರಮ ವಹಿಸಲು ಸಭೆಗೆ ಸೂಚಿಸಿದರು.

5) **<u>ರಿವ್ಲೋಬ್ ರೆಸಿಡೆನ್ಷಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ) ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ,</u>** ಇತ್ತೀಚೆಗೆ ಬೆಂಗಳೂರಿನಾದ್ಯಂತ ಕೊರೊನಾ ಆರ್ಭಟ ಹೆಚ್ಚಾಗುತ್ತಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಕೊರೊನಾ ತಡೆಗೆ ಮಾರ್ಷಲ್‌ಗಳನ್ನು ನೇಮಕ ಮಾಡಿದ್ದು, ವಾರ್ಡಿನಲ್ಲಿ ಈಗ ನೇಮಿಸಿರುವ ಮಾರ್ಷಲ್‌ಗಳ ಸಂಖ್ಯೆಯನ್ನು ಹೆಚ್ಚಿಸಿದಲ್ಲಿ, ವಾರ್ಡ್ ವ್ಯಾಪ್ತಿಯ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಮಾಸ್ಕ್ ಹಾಗೂ ಸಾಮಾಜಿಕ ಅಂತರ ಕಾಪಾಡಿಕೊಳ್ಳದ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿ, ಉಲ್ಲಂಘಿಸಿದಲ್ಲಿ ಸಾರ್ವಜನಿಕರಿಗೆ ದಂಡ ವಿಧಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಮಾರ್ಷಲ್‌ಗಳ ಸಂಖ್ಯೆಯನ್ನು ಹೆಚ್ಚಿಸಲು ಮೇಲಾಧಿಕಾರಿಗಳ ಗಮನಕ್ಕೆ ತಂದು ಈ ಬಗ್ಗೆ ಚರ್ಚಿಸಿ ಕ್ರಮ ವಹಿಸಲಾಗುವುದೆಂದು ಸಭೆಗೆ ತಿಳಿಸಿದರು.

6) **<u>ರಿವ್ಲೋಬ್ ರೆಸಿಡೆನ್ಷಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ) ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ,</u>** ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಬೆಸ್ಕಾಂ ಇಲಾಖೆಯವರು ಎಲ್ಲಂದರಲ್ಲಿ ರಸ್ತೆ ಕತ್ತರಿಸಿ, ವಿದ್ಯುತ್ ಕೇಬಲ್‌ಗಳನ್ನು ಅಳವಡಿಸುತ್ತಿದ್ದು ಇದರಿಂದ ಸಾರ್ವಜನಿಕರ ಓಡಾಟಕ್ಕೆ ತುಂಬಾ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಪಾಲಿಕೆಯ ರಸ್ತೆಯನ್ನು ಕತ್ತರಿಸಬೇಕಾದಲ್ಲಿ ಪಾಲಿಕೆ ವತಿಯಿಂದ ಪೂರ್ವಾನುಮತಿಯನ್ನು ಪಡೆದು ಕತ್ತರಿಸಲು ಹಾಗೂ ಅಗೆದ ರಸ್ತೆಯನ್ನು ಪುನರ್ ನಿರ್ಮಾಣ ಮಾಡಲು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

7) **ಮಾನ್ಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳು ಮಾತನಾಡಿ,** ಮಾರುತಿಸೇವಾನಗರ ವಾರ್ಡಿನ ವ್ಯಾಪ್ತಿಯಲ್ಲಿ ಕೊರೋನಾ ಸಂಬಂಧಿಸಿದ ವಿವರವನ್ನು ಸಭೆಯಲ್ಲಿ ಹಾಜರಿದ್ದ ವೈದ್ಯಾಧಿಕಾರಿಗಳಿಗೆ ಕೇಳಿದಾಗ, ವೈದ್ಯಾಧಿಕಾರಿಗಳು ಮಾತನಾಡಿ ವಾರ್ಡಿನಲ್ಲಿ ಒಟ್ಟು 467 ಪ್ರಕರಣಗಳಿದ್ದು, ಈ ಪೈಕಿ 377 ಜನ ಗುಣಮುಖರಾಗಿ ಮನೆಗೆ ತೆರಳಿರುವುದಾಗಿ, ಹಾಗೂ 17 ಜನ ಮೃತಪಟ್ಟಿರುತ್ತಾರೆ. ಪ್ರಸ್ತುತ 96 ಸಕ್ರಿಯ ಪ್ರಕರಣಗಳು ಇರುವುದಾಗಿ ಸಭೆಗೆ ತಿಳಿಸಿದರು. ಹಾಗೂ ಸಾರ್ವಜನಿಕರು ಕೊರೋನಾ ಪರೀಕ್ಷೆ ಮಾಡಿಸಲು ಹೆದರುತ್ತಿರುವುದು

ಕಂಡುಬಂದಿದ್ದು, ಈ ಬಗ್ಗೆ ಯಾವುದೇ ಹೆದರಿಕೆ ಅವಶ್ಯವಿರುವುದಿಲ್ಲ. ಪ್ರಸ್ತುತ ರ್‍ಯಾಪಿಟ್ ಆಂಟಿಜೆನ್ ಟೆಸ್ಟ್ ಮಾಡಿದ 30 ನಿಮಿಷಗಳಲ್ಲಿ ಹಾಗೂ ಆರ್.ಟಿ.ಪಿ.ಸಿ.ಆರ್ ಪರೀಕ್ಷೆ ನಡೆಸಿದಲ್ಲಿ 04 ಗಂಟೆಗಳಲ್ಲಿ ಫಲಿತಾಂಶ ಬರುವುದರಿಂದ ಸಾರ್ವಜನಿಕರಿಂದ ಇತರರಿಗೆ ರೋಗ ಹರಡುವ ಸಾಧ್ಯತೆ ಕಡಿಮೆ ಇರುತ್ತದೆ ಎಂದು ಸಭೆಗೆ ತಿಳಿಸಿದರು. ನಂತರ ಮಾನ್ಯ ಅಧ್ಯಕ್ಷರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಕಮಿಟಿ ಸದಸ್ಯರು ತಮ್ಮ ಬಡಾವಣೆ ಹಾಗೂ ಮನೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಯಾವುದೇ ರೋಗ ಲಕ್ಷಣಗಳು ಕಂಡುಬಂದ ವ್ಯಕ್ತಿಗೆ ಪರೀಕ್ಷೆ ಮಾಡಿಸಲು ಸಹಕರಿಸಲು ಸಭೆಯಲ್ಲಿ ತಿಳಿಸಿದರು.

8) **ಶಾಂತಕುಮಾರ್ ಲೇಔಟ್ ರೆಸಿಡೆನ್ಷಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ) ಸದಸ್ಯರು ಮಾತನಾಡುತ್ತಾ,** ವಾರ್ಡ್ ವ್ಯಾಪ್ತಿಯ ಕುಕ್‌ಟೌನ್‌ನಲ್ಲಿ ಮನೆ ಮನೆಗಳಿಂದ ಕಸವನ್ನು ಸಮರ್ಪಕವಾಗಿ ಸಂಗ್ರಹಣೆ ಮಾಡದೇ ಇರುವುದರಿಂದ ಕಸವನ್ನು ಎಲ್ಲಂದರಲ್ಲಿ ಎಸೆದು ವಾರ್ಡಿನ ಶುಚಿತ್ವವನ್ನು ಹಾಳು ಮಾಡುತ್ತಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿದಾಗ ಮಾನ್ಯ ಅಧ್ಯಕ್ಷರು ಮಾತನಾಡಿ ವಾರ್ಡಿನ ಪ್ರತಿ ಬ್ಲಾಕುಗಳಿಗೆ ನಿಯೋಜಿಸಿರುವ ಪೌರಕಾರ್ಮಿಕರು ಪ್ರತಿ ನಿತ್ಯ ಮನೆ ಮನೆಗಳಿಂದ ಕಸವನ್ನು ಸಂಗ್ರಹಣೆ ಮಾಡಿ, ಸಮರ್ಪಕವಾಗಿ ವಿಲೇವಾರಿ ಮಾಡಲು ಹಾಗೂ ಸಾರ್ವಜನಿಕರು ಕಸವನ್ನು ತಮ್ಮ ಮನೆಯ ಮುಂದೆ ಬರುವ ಪಾಲಿಕೆಯ ಆಟೋ ಟಿಪ್ಪರ್‌ಗೆ ಮಾತ್ರ ನೀಡಲು ಹಾಗೂ ಎಲ್ಲಂದರಲ್ಲಿ ಕಸವನ್ನು ಎಸೆಯುವುದು ಕಂಡುಬಂದಲ್ಲಿ ವಾರ್ಡಿನಲ್ಲಿ ನಿಯೋಜಿಸಿರುವ ಮಾರ್ಷಲ್‌ಗಳಿಗೆ ಅಂತಹ ಸಾರ್ವಜನಿಕರ ವಿರುದ್ದ ಕ್ರಮ ಕೈಗೊಳ್ಳಲು ಹಾಗೂ ದಂಡ ವಿಧಿಸಲು ಕ್ರಮ ವಹಿಸಲು ಆರೋಗ್ಯ ನಿರೀಕ್ಷರಿಗೆ ಸಭೆಯಲ್ಲಿ ಸೂಚಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

Revenue Officer
Sarvagna Nagar Division
Bruhat Bengaluru Mahanagara Palike

**ಪ್ರತಿಯನ್ನು**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ.
6) ಕಛೇರಿ ಕಡತಕ್ಕೆ.